ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಅರುಣ ಶಹಾಪುರ ಇವರು ನಿಯಮ -72 ರಡಿಯಲ್ಲಿ ನೀಡಿರುವ ಸೂಚನಾ ಪತ್ರಕ್ಕೆ ಉತ್ತರ

**ವಿಷಯ:**

ಕುಮಾರ್ ನಾಯಕ್ ವರದಿಯನ್ವಯ ಒಂದು ವಿಶೇಷ ವೇತನ ಬಡ್ತಿಯನ್ನು ಎಲ್ಲ ಪ್ರೌಢಶಾಲಾ ಶಿಕ್ಷಕರಿಗೆ ಮುಖ್ಯೋಪಾಧ್ಯಾಯರಿಗೆ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರಿಗೆ ಪ್ರಾಂಶುಪಾಲರಿಗೆ ಈಗಾಗಲೇ ಇಲಾಖೆ ನೀಡಿದ್ದು, ಆದರೆ ಇದೇ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಡಿ.ಎಡ್ ಪ್ರಾಚಾರ್ಯರಿಗೆ ಮಾತ್ರ ಈ ವಿಶೇಷ ವೇತನ ಬಡ್ತಿಯನ್ನು ನೀಡದೆ ಅನ್ಯಾಯಕ್ಕೆ ಒಳಪಡಿಸಿರುವ ಹಿನ್ನೆಲೆಯಲ್ಲಿ ಕೂಡಲೇ ಇವರುಗಳಿಗೆ ಈ ಸೌಲಭ್ಯ ಒದಗಿಸುವ ಬಗ್ಗೆ ಪ್ರಸ್ತಾಪಿಸಿರುವ ಕುರಿತು.

**ಉತ್ತರ:**

1981ರ ವೃಂದ ಮತ್ತು ನೇಮಕಾತಿ ನಿಯಮದಂತೆ ಸರ್ಕಾರಿ / ಅನುದಾನಿತ ಶಿಕ್ಷಕರ ತರಬೇತಿ ಸಂಸ್ಥೆಗಳಲ್ಲಿನ ಬೋಧಕ ಹುದ್ದೆಗಳು ಪ್ರೌಢ ಶಾಲೆ ಬೋಧಕ ಹುದ್ದೆಗಳು ಸಮಾನಾಂತರ ಹುದ್ದೆಗಳಾಗಿರುತ್ತವೆ. ಶಿಕ್ಷಕರ ತರಬೇತಿ ಸಂಸ್ಥೆಗಳಲ್ಲಿನ ಅಧೀಕ್ಷಕರ ಹುದ್ದೆ ಪ್ರೌಢ ಶಾಲಾ ಮುಖ್ಯೋಪಾಧ್ಯಾಯರ ಹುದ್ದೆಗಳಿಗೆ ಸಮಾನಾಂತರ ಹುದ್ದೆಗಳಾಗಿರುತ್ತವೆ.

ಸರ್ಕಾರದ ಆದೇಶ ಸಂ: ಇಡಿ 336 ಪಿಟಿಐ 2010, ದಿ:11.2.2011ರಲ್ಲಿ ಸರ್ಕಾರಿ ಶಿಕ್ಷಕರ ತರಬೇತಿ ಸಂಸ್ಥೆಗಳಲ್ಲಿನ ಹಾಗೂ ಅನುದಾನಿತ ಶಿಕ್ಷಕರ ತರಬೇತಿ ಸಂಸ್ಥೆಗಳಲ್ಲಿನ ಅಧೀಕ್ಷಕರನ್ನು ಪ್ರಾಂಶುಪಾಲರೆಂದು ಪ್ರಶಿಕ್ಷಕರನ್ನು ಉಪನ್ಯಾಸಕರೆಂದು ಮರುಪದನಾಮೀಕರಿಸಿ ವೇತನ ಶ್ರೇಣಿ ಪರಿಷ್ಕರಿಸಲಾಗಿದೆ.

ಕರ್ನಾಟಕ ರಾಜ್ಯ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರುಗಳ ವೇತನ ಶ್ರೇಣಿಯ ತಾರತಮ್ಯದ ಬಗ್ಗೆ ಹಾಗೂ ಇತರೆ ಬೇಡಿಕೆಗಳನ್ನು ಈಡೇರಿಸಲು ಅಂದಿನ ಶಿಕ್ಷಣ ಇಲಾಖೆಯ ಸರ್ಕಾರದ ಕಾರ್ಯದರ್ಶಿಗಳಾದ ಶ್ರೀ ಕುಮಾರ್ ನಾಯಕ್ ರವರ ನೇತೃತ್ವದಲ್ಲಿ ಸಮಿತಿ ರಚಿಸಿದ್ದು, ಸದರಿ ಸಮಿತಿಯ ವರದಿಯಲ್ಲಿನ ಮುಖ್ಯಾಂಶವು ಈ ಕೆಳಕಂಡಂತಿದೆ:

> 8.2.7 ಪದವಿ ಪೂರ್ವ ಕಾಲೇಜಿನ ಉಪನ್ಯಾಸಕರಿಗೆ ವಿಶೇಷ ಭತ್ಯೆ "ಪದವಿ ಪೂರ್ವ ಕಾಲೇಜಿನ ಉಪನ್ಯಾಸಕರಿಗೆ ಹೆಚ್ಚಿನ ವೇತನ ಶ್ರೇಣಿ ನೀಡಿಕೆಯನ್ನು ಪರಿಗಣಿಸಲು ಸರ್ಕಾರದಿಂದ ವಿಶೇಷ ಸೂಚನೆಯನ್ನು ನೀಡಲಾಗಿತ್ತು. ಈ ವಿಷಯವನ್ನು ಸಮಿತಿಯು ವಿವರವಾಗಿ ಪರಿಶೀಲಿಸಿದೆ. 11 ಮತ್ತು 12 ನೆಯ ತರಗತಿಗಳನ್ನು ಸೆಕೆಂಡರಿ ಶಿಕ್ಷಣ ವ್ಯವಸ್ಥೆಯ ವ್ಯಾಪ್ತಿಯಲ್ಲಿ ತರಬೇಕೆಂಬ ಕೇಂದ್ರ ಸರ್ಕಾರದ ಮಾರ್ಗಸೂಚಿಗಳ ಹಿನ್ನೆಲೆಯಲ್ಲಿ ಪದವಿ ಪೂರ್ವ ಶಿಕ್ಷಣ ವ್ಯವಸ್ಥೆಯ ಪುನರ್ ರಚನೆಯ ಪ್ರಕ್ರಿಯೆಯು ಪೂರ್ಣವಾದ ನಂತರ ಪ್ರತ್ಯೇಕ ವೇತನ ಶ್ರೇಣಿ ನೀಡಿಕೆಯ ಬಗ್ಗೆ ಪರಿಗಣಿಸಬಹುದಾಗಿದೆ. ಸದ್ಯಕ್ಕೆ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರಿಗೆ ಮಾಸಿಕ ರೂ.500/-ಗಳ ವಿಶೇಷ ಭತ್ಯೆಯನ್ನು ಮಂಜೂರು ಮಾಡಲು ಸಮಿತಿಯು ಶಿಫಾರಸ್ಸು ಮಾಡುತ್ತದೆ. ಕೆಲವು ಉಪನ್ಯಾಸಕರಿಗೆ ಈಗ ನೀಡುತ್ತಿರುವ ಮಾಸಿಕ ರೂ.200/-ಗಳ ವಿಶೇಷ ಭತ್ಯೆಯ ಬದಲಾಗಿ ಈ ವಿಶೇಷ ಭತ್ಯೆಯನ್ನು ಮಂಜೂರು ಮಾಡಲಾಗಿದೆ.

ಸರ್ಕಾರದ ಆದೇಶ ಸಂಖ್ಯೆ: ಇಡಿ 87 ಡಿಜಿಡಿ 2016, ದಿನಾಂಕ:15.04.2016ರಲ್ಲಿ ಜೂನ್ 2016ರಂದು ಕಾರ್ಯನಿರ್ವಹಿಸುತ್ತಿರುವ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರು / ಉಪನ್ಯಾಸಕರುಗಳಿಗೆ ಒಂದು ಹೆಚ್ಚುವರಿ ವೇತನ ಬಡ್ತಿಯನ್ನು ಮಂಜೂರು ಮಾಡಲಾಗಿದೆ.

ಸರ್ಕಾರದ ಆದೇಶ ಸಂಖ್ಯೆ: ಇಡಿ 145 ಎಸ್ ಎಲ್ ಬಿ 2017 (ಭಾಗ-1), ದಿನಾಂಕ:20.09.2017ರಲ್ಲಿ 1ನೇ ಜೂನ್ 2016ರಂದು ಕಾರ್ಯನಿರ್ವಹಿಸುತ್ತಿರುವ ಈ ಕೆಳಕಂಡ ಸರ್ಕಾರಿ ಪ್ರೌಢಶಾಲಾ ಮುಖ್ಯಶಿಕ್ಷಕ ವೃಂದದ ಸಮಾನಾಂತರ, ಪ್ರೌಢಶಾಲಾ ಸಹ ಶಿಕ್ಷಕರ ಸಮಾನಾಂತರ ಹುದ್ದೆಗಳಲ್ಲಿ ಮತ್ತು ವೃತ್ತಿ ಶಿಕ್ಷಕರ ಸಮಾನಾಂತರ ಹುದ್ದೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪ್ರೌಢಶಾಲಾ ಮುಖ್ಯಶಿಕ್ಷಕರು, ಪ್ರೌಢಶಾಲಾ ಸಹ ಶಿಕ್ಷಕರು ಮತ್ತು ಪ್ರೌಢಶಾಲಾ ವೃತ್ತಿ ಶಿಕ್ಷಕರುಗಳಿಗೆ ದಿನಾಂಕ:01.06.2016ರಿಂದ ಜಾರಿಗೆ ಬರುವಂತೆ ಒಂದು ಹೆಚ್ಚುವರಿ ವೇತನ ಬಡ್ತಿ ಸೌಲಭ್ಯವನ್ನು ಮಂಜೂರು ಮಾಡಿ ಆದೇಶಿಸಲಾಗಿದೆ.

| ಕ್ರ.ಸಂ | ಹುದ್ದೆಯ ಪದನಾಮ |
|---|---|
| ಅ) ಸರ್ಕಾರಿ ಪ್ರೌಢ ಶಾಲಾ ಮುಖ್ಯ ಶಿಕ್ಷಕರು ಹಾಗೂ ಸಮಾನಾಂತರ ಹುದ್ದೆಗಳು | |
| 3 | ಉಪನ್ಯಾಸಕರು (ಡಯಟ್) |
| 4 | ಉಪನ್ಯಾಸಕರು (ಟಿಟಿಐ) |

ಸರ್ಕಾರಿ ಆದೇಶ ಸಂಖ್ಯೆ: ಆಇ 28 ಎಸ್ ಆರ್ ಪಿ 2018ರಲ್ಲಿ ದಿನಾಂಕ:15.04.2016ರ ಆದೇಶ ಸಂಖ್ಯೆ: ಇಡಿ 87 ಡಿಜಿಡಿ 2016ರನ್ವಯ, ಶಿಕ್ಷಣ ಇಲಾಖೆಯಡಿ ಬರುವ ಜೂನ್ 2016ರಂದು ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕರು ಮತ್ತು ಪ್ರಾಂಶುಪಾಲರಿಗೆ ದಿನಾಂಕ:01.06.2016ರಿಂದ ಜಾರಿಗೆ ಬರುವಂತೆ ಮಂಜೂರು ಮಾಡಲಾಗಿದ್ದ ಒಂದು ಹೆಚ್ಚುವರಿ ವೇತನ ಬಡ್ತಿಯನ್ನು ದಿನಾಂಕ:01.11.2018ರಿಂದ ಜಾರಿಗೆ ಬರುವಂತೆ ಮೂಲ ವೇತನದೊಂದಿಗೆ ವಿಲೀನಗೊಳಿಸಿ, ದಿನಾಂಕ:15.04.2016ರ ಆದೇಶವನ್ನು ನಿರಸನಗೊಳಿಸಲಾಗಿರುತ್ತದೆ.

ಡಿ.ಎಲ್.ಇ.ಡಿ ಕಾಲೇಜಿನ ಪ್ರಾಂಶುಪಾಲರುಗಳಿಗೆ ಒಂದು ಹೆಚ್ಚುವರಿ ವೇತನವನ್ನು ನೀಡುವ ಕುರಿತಂತೆ, ಆರ್ಥಿಕ ಇಲಾಖೆಯ ಸಂಖ್ಯೆ: ಆಇ 1003 ವೆಚ್ಚ-8/2018, ದಿನಾಂಕ:19.02.2019ರಲ್ಲಿ ಈ ಕೆಳಕಂಡಂತೆ ಅಭಿಪ್ರಾಯಿಸಿರುತ್ತದೆ

> "ದಿನಾಂಕ:20.10.2018ರ ಸರ್ಕಾರಿ ಆದೇಶ ಸಂಖ್ಯೆ: ಆಇ 28 ಎಸ್ ಆರ್ ಪಿ 2018ರಲ್ಲಿ ದಿನಾಂಕ:15.04.2015ರ ಸರ್ಕಾರಿ ಆದೇಶ ಸಂಖ್ಯೆ: ಇಡಿ 87 ಡಿಜಿಡಿ 2016ರನ್ವಯ, ಶಿಕ್ಷಣ ಇಲಾಖೆಯಡಿ ಬರುವ ಜೂನ್ 2016ರಂದು ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕರು ಮತ್ತು ಪ್ರಾಂಶುಪಾಲರಿಗೆ ದಿನಾಂಕ:01.06.2016ರಿಂದ ಜಾರಿಗೆ ಬರುವಂತೆ ಮಂಜೂರು ಮಾಡಲಾಗಿದ್ದ ಒಂದು ಹೆಚ್ಚುವರಿ ವೇತನ ಬಡ್ತಿಯನ್ನು ದಿನಾಂಕ:01.11.2018ರಿಂದ ಜಾರಿಗೆ ಬರುವಂತೆ ಮೂಲ ವೇತನದೊಂದಿಗೆ ವಿಲೀನಗೊಳಿಸಿ, ದಿನಾಂಕ:15.04.2016ರ ಆದೇಶವನ್ನು ನಿರಸನಗೊಳಿಸಲಾಗಿರುತ್ತದೆ. ಪ್ರಸ್ತುತ, ದಿನಾಂಕ:15.04.2016ರ ಸರ್ಕಾರಿ ಆದೇಶ ಸಂಖ್ಯೆ: ಇಡಿ 87 ಡಿಜಿಡಿ 2016, ನಿರಸನಗೊಂಡಿದ್ದು, ಪ್ರಸ್ತುತ ಚಾಲ್ತಿಯಲ್ಲಿರುವುದಿಲ್ಲವಾದ್ದರಿಂದ, ಶಿಕ್ಷಣ ಇಲಾಖೆಯ ಪ್ರಸ್ತಾವನೆಯನ್ನು ಈ ಹಂತದಲ್ಲಿ ಒಪ್ಪಲು ಸಾಧ್ಯವಿಲ್ಲವೆಂದು ತಿಳಿಸಿದೆ"

ಅನುದಾನಿತ ಡಿ.ಇಡಿ ಕಾಲೇಜುಗಳ ಉಪನ್ಯಾಸಕರಿಗೆ ಒಂದು ಹೆಚ್ಚುವರಿ ವೇತನ ಕೈಬಿಟ್ಟಿರುವ ಕುರಿತಂತೆ, ಶ್ರೀ ಕುಮಾರ್ ನಾಯಕ್ ಸಮಿತಿಯ ವರದಿಯಲ್ಲಿ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ವೇತನ ತಾರತಮ್ಯ ಪರಿಷ್ಕರಣೆಗಾಗಿ ಮಾತ್ರ ರಚಿಸಲಾಗಿದ್ದು, ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರಿಗೆ ನೀಡಿದ ಹೆಚ್ಚುವರಿ ವೇತನವನ್ನು ಡಿ.ಎಲ್.ಇಡಿ ಕಾಲೇಜಿನ ಪ್ರಾಂಶುಪಾಲರಿಗೂ ನೀಡುವುದು ಸಮಂಜಸವಾಗುವುದಿಲ್ಲ. ಹಾಗೂ ಸರ್ಕಾರದ ಆದೇಶ ಸಂ: ಇಡಿ 87 ಡಿಜಿಡಿ 2016, ದಿ:15.4.2016ರಲ್ಲಿ ಈಗಾಗಲೇ ನಿರಸನಗೊಂಡಿರುವುದರಿಂದ, ಡಿ.ಎಲ್.ಇಡಿ ಕಾಲೇಜಿನ ಪ್ರಾಂಶುಪಾಲರಿಗೆ ಹೆಚ್ಚುವರಿ ವೇತನ ಬಡ್ತಿ ನೀಡಲು ನಿಯಮಗಳಲ್ಲಿ ಅವಕಾಶವಿರುವುದಿಲ್ಲ.

ಸಂಖ್ಯೆ: ಇಡಿ 69 ಪಿಟಿಐ 2021

(ಬಿ.ಸಿ.ನಾಗೇಶ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ
ಹಾಗೂ ಸಕಾಲ ಸಚಿವರು